ನಿಶ್ಚಯವಾಗಿಯೂ ಅಲ್ಲಾಹು ಮತ್ತು ಅವನ ಸಂದೇಶವಾಹಕರು ಮದ್ಯ, ಸತ್ತ ಪ್ರಾಣಿ, ಹಂದಿ ಮಾಂಸ ಮತ್ತು ವಿಗ್ರಹಗಳ ಮಾರಾಟವನ್ನು ನಿಷೇಧಿಸಿದ್ದಾರೆ

ಜಾಬಿರ್ ಬಿನ್ ಅಬ್ದುಲ್ಲಾ (ಅಲ್ಲಾಹು ಅವರ ಬಗ್ಗೆ ಸಂಪ್ರೀತನಾಗಲಿ) ರಿಂದ ವರದಿ. ಅಲ್ಲಾಹನ ಸಂದೇಶವಾಹಕರು (ಅವರ ಮೇಲೆ ಅಲ್ಲಾಹನ ಕೃಪೆ ಮತ್ತು ಶಾಂತಿಯಿರಲಿ) ಮಕ್ಕಾ ವಿಜಯದ ವರ್ಷ ಮಕ್ಕಾದಲ್ಲಿದ್ದಾಗ ಹೀಗೆ ಹೇಳುವುದನ್ನು ಅವರು ಕೇಳಿದ್ದಾರೆ: "ನಿಶ್ಚಯವಾಗಿಯೂ ಅಲ್ಲಾಹು ಮತ್ತು ಅವನ ಸಂದೇಶವಾಹಕರು ಮದ್ಯ, ಸತ್ತ ಪ್ರಾಣಿ, ಹಂದಿ ಮಾಂಸ ಮತ್ತು ವಿಗ್ರಹಗಳ ಮಾರಾಟವನ್ನು ನಿಷೇಧಿಸಿದ್ದಾರೆ." ಆಗ ಒಬ್ಬರು ಕೇಳಿದರು: "ಓ ಅಲ್ಲಾಹನ ಸಂದೇಶವಾಹಕರೇ! ಸತ್ತ ಪ್ರಾಣಿಗಳ ಕೊಬ್ಬನ್ನು ನಿಷೇಧಿಸಲಾಗಿದೆಯೇ? ಏಕೆಂದರೆ, ಇದನ್ನು ಹಡಗುಗಳಿಗೆ ಲೇಪಿಸಲು ಮತ್ತು ತೊಗಲನ್ನು ಹದಗೊಳಿಸಲು ಬಳಸಲಾಗುತ್ತದೆ. ಜನರು ಇದನ್ನು ದೀಪ ಉರಿಸಲು ಕೂಡ ಬಳಸುತ್ತಾರೆ." ಅವರು ಹೇಳಿದರು: "ಇಲ್ಲ. ಅದು ನಿಷೇಧಿಸಲಾಗಿದೆ." ನಂತರ ಇದಕ್ಕೆ ಸಂಬಂಧಿಸಿ ಅಲ್ಲಾಹನ ಸಂದೇಶವಾಹಕರು (ಅವರ ಮೇಲೆ ಅಲ್ಲಾಹನ ಕೃಪೆ ಮತ್ತು ಶಾಂತಿಯಿರಲಿ) ಹೇಳಿದರು: "ಅಲ್ಲಾಹು ಯಹೂದಿಗಳನ್ನು ನಾಶಗೊಳಿಸಲಿ. ಅಲ್ಲಾಹು ಅವರಿಗೆ ಪ್ರಾಣಿಗಳ ಕೊಬ್ಬನ್ನು ನಿಷೇಧಿಸಿದಾಗ, ಅವರು ಅದನ್ನು
ಕರಗಿಸಿ, ಅದರ ಎಣ್ಣೆಯನ್ನು ಮಾರಾಟ ಮಾಡಿದರು ಮತ್ತು ಅದರ ಹಣವನ್ನು ತಿಂದು ತೇಗಿದರು."
[صحيح] [متفق عليه]

ಅಲ್ಲಾಹನ ಸಂದೇಶವಾಹಕರು (ಅವರ ಮೇಲೆ ಅಲ್ಲಾಹನ ಕೃಪೆ ಮತ್ತು ಶಾಂತಿಯಿರಲಿ) ಮಕ್ಕಾ ವಿಜಯದ ವರ್ಷ ಮಕ್ಕಾದಲ್ಲಿದ್ದಾಗ ಹೀಗೆ ಹೇಳುವುದನ್ನು ಜಾಬಿರ್ ಬಿನ್ ಅಬ್ದುಲ್ಲಾ (ಅಲ್ಲಾಹು ಅವರ ಬಗ್ಗೆ ಸಂಪ್ರೀತನಾಗಲಿ) ಕೇಳಿದರು: "ನಿಶ್ಚಯವಾಗಿಯೂ ಅಲ್ಲಾಹು ಮತ್ತು ಅವನ ಸಂದೇಶವಾಹಕರು ಮದ್ಯ, ಸತ್ತ ಪ್ರಾಣಿ, ಹಂದಿ ಮಾಂಸ ಮತ್ತು ವಿಗ್ರಹಗಳ ಮಾರಾಟವನ್ನು ನಿಷೇಧಿಸಿದ್ದಾರೆ." ಆಗ ಒಬ್ಬರು ಕೇಳಿದರು: "ಓ ಅಲ್ಲಾಹನ ಸಂದೇಶವಾಹಕರೇ! ನಾವು ಸತ್ತ ಪ್ರಾಣಿಗಳ ಕೊಬ್ಬನ್ನು ಮಾರಾಟ ಮಾಡಬಹುದೇ? ಏಕೆಂದರೆ, ಹಡಗುಗಳಿಗೆ ಲೇಪಿಸಲು, ತೊಗಲನ್ನು ಹದಗೊಳಿಸಲು ಮತ್ತು ಜನರು ದೀಪ ಉರಿಸಲು ಇದನ್ನು ಬಳಸುತ್ತಾರೆ." ಆಗ ಅವರು ಹೇಳಿದರು: "ಇಲ್ಲ, ಅದರ ಮಾರಾಟವನ್ನು ನಿಷೇಧಿಸಲಾಗಿದೆ." ನಂತರ ಇದಕ್ಕೆ ಸಂಬಂಧಿಸಿ ಪ್ರವಾದಿಯವರು (ಅವರ ಮೇಲೆ ಅಲ್ಲಾಹನ ಕೃಪೆ ಮತ್ತು ಶಾಂತಿಯಿರಲಿ) ಹೇಳಿದರು: "ಅಲ್ಲಾಹು ಯಹೂದಿಗಳನ್ನು ನಾಶಗೊಳಿಸಲಿ ಮತ್ತು ಶಪಿಸಲಿ. ಅಲ್ಲಾಹು ಅವರಿಗೆ ಜಾನುವಾರುಗಳ ಕೊಬ್ಬನ್ನು ನಿಷೇಧಿಸಿದಾಗ, ಅವರು ಅದನ್ನು ಕರಗಿಸಿದರು. ನಂತರ ಅದರ ಎಣ್ಣೆಯನ್ನು ಮಾರಾಟ ಮಾಡಿ ಅದರ ಹಣವನ್ನು ತಿಂದು ತೇಗಿದರು."

http://www.sunnah.global/hadeeth/kn/show/4556